**Karnataka Nursing & Para Medical Sciences Education(Regulation), Authority**
**Para Medical Baord,**
New No: 40/20A, Lakshmi Complex, First Floor, Opp. Vani Vilas Hospital, Fort,
Bengaluru-560002
**Contact No:** 080-26702159, 26705773, 26703922 Fax: 26705410

PMB/ /2020-21 Date:04.09.2021

# ಸುತ್ತೋಲೆ

ವಿಷಯ: ಅರೆವೈದ್ಯಕೀಯ ಡಿಪ್ಲೋಮಾ ಕೋರ್ಸ್‌ಗಳಿಗೆ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ.
ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಸಿ4(6)ಸಪ್ರೌಶಾ/ಶಾ.ಕಾ.ಪ್ರ/23/2020-21 ದಿನಾಂಕ:31.08.2021.

*******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರಿ ಆದೇಶದ ಪ್ರಕಾರ ದಿನಾಂಕ:06.09.2021 ರಿಂದ ಅರೆವೈದ್ಯಕೀಯ ಡಿಪ್ಲೋಮಾ ಕೋರ್ಸ್‌ಗಳಲ್ಲಿ ವ್ಯಾಸಾಂಗ ಮಾಡುತ್ತಿರುವ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಭೌತಿಕ ತರಗತಿಗಳನ್ನು ಪ್ರಾರಂಭಿಸುವಂತೆ ಈ ಮೂಲಕ ಸೂಚಿಸಲಾಗಿದೆ. ತರಗತಿಗಳನ್ನು ಪ್ರಾರಂಭಿಸುವ ಮುಂಚೆ ಕೋವಿಡ್-19ಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳು ಸೂಚಿಸಿರುವ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ವಿಶೇಷಾಧಿಕಾರಿಗಳು
ಕರ್ನಾಟಕ ಶುಶ್ರೂಷ ಮತ್ತು ಅರೆ ವೈದ್ಯಕೀಯ
ನಿಯಂತ್ರಣ ಪ್ರಾಧಿಕಾರ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ:**

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು.

ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:ಸಿ4(6)ಸಪ್ರೌಶಾ/ಶಾ.ಕಾ.ಪ್ರ/23/2020-21 ದಿನಾಂಕ:31/08/2021

~ : ಸುತ್ತೋಲೆ : ~

ವಿಷಯ: ರಾಜ್ಯದಲ್ಲಿನ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿನ 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗಳನ್ನು ಭೌತಿಕವಾಗಿ ಪೂರ್ಣ ಪ್ರಮಾಣದಲ್ಲಿ ಪ್ರಾರಂಭ ಮಾಡುವ ಬಗ್ಗೆ~

ಉಲ್ಲೇಖ:
1.ದಿ:06/08/2021, 14/08/2021 ಮತ್ತು 30/08/2021 ರಂದು ಸನ್ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನಗಳಂತೆ.
2.ಶಾಲೆಗಳಲ್ಲಿ ಅನುಸರಿಸಬೇಕಾದ ಪ್ರಮಾಣಿತ ಕಾರ್ಯಾಚರಣೆ ವಿಧಾನ (ಎಸ್‌ಒಪಿ)ಸುತ್ತೋಲೆ ಸಂಖ್ಯೆ:ಡಿ.ಎಸ್.ಇಆರ್.ಟಿ./ಇಪಿಜಿ/ಶಾ.ಪ್ರಾ/ಪ್ರ.ಕಾ.ವಿ 2020-21 ದಿ:12/08/2021
3.ಈ ಕಛೇರಿಯ ಪತ್ರ ಸಂ:ಎಡಿಎಂ2(1)/ಶೈ.ವ.ನಿ.01/2021-22 ದಿ:10/06/2021.
4.ಡಿ.ಎಸ್.ಇ.ಆರ್.ಟಿ/ಇವಿಜಿ/ಪ.ಶೈ.ಕ್ಯಾ/07/2021-22 ದಿ:30/07/2021
5.ಈ ಕಛೇರಿಯ ಪತ್ರ ಸಂಖ್ಯೆ:ಡಿ.ಎಸ್.ಇ.ಆರ್.ಟಿ/ಇವಿಜಿ/1-10/ ಮೌಲ್ಯಾಂಕನ/2021-22, ದಿ:11/08/2021.
6.ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ4(6)ಸಪ್ರೌಶಾ/ಶಾ.ಕಾ.ಪ್ರ/23/2020-21. ದಿನಾಂಕ:16/08/2021.

*****

ಉಲ್ಲೇಖ (1) ರಂತೆ ರಾಜ್ಯದಲ್ಲಿ 2021-22ನೇ ಶೈಕ್ಷಣಿಕ ಸಾಲಿನಲ್ಲಿ ಶಾಲೆಗಳನ್ನು ಭೌತಿಕವಾಗಿ ಪ್ರಾರಂಭಿಸುವ ಕುರಿತು ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಆರೋಗ್ಯ ಸಚಿವರು ಮತ್ತು ಇಲಾಖೆಯ ಕೋವಿಡ್-19 ತಾಂತ್ರಿಕ ಸಲಹಾ ಸಮಿತಿಯ ಸದಸ್ಯರು ಹಾಗೂ ವಿವಿಧ ಇಲಾಖೆಯ ಹಿರಿಯ ಅಧಿಕಾರಿಗಳ ಸಭೆಯಲ್ಲಿ ಚರ್ಚಿಸಿ ದಿನಾಂಕ:06/09/2021 ರಿಂದ ರಾಜ್ಯದಲ್ಲಿ ಕೋವಿಡ್-19ರ ಸೋಂಕಿನ ಪ್ರಮಾಣ 2% ಗಿಂತ ಕಡಿಮೆ ಇರುವ ತಾಲ್ಲೂಕು/ವಲಯಗಳಲ್ಲಿ (ಕೇರಳ ರಾಜ್ಯದೊಡನೆ ಗಡಿ ಹಂಚಿಕೊಂಡಿರುವ ತಾಲ್ಲೂಕುಗಳನ್ನು ಹೊರತುಪಡಿಸಿ) 9 ಮತ್ತು 10ನೇ ತರಗತಿಗಳ ಜೊತೆಗೆ 6 ರಿಂದ 8ನೇ ತರಗತಿಗಳನ್ನು ಪೂರ್ಣ ಪ್ರಮಾಣದಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಭೌತಿಕವಾಗಿ ಪ್ರಾರಂಭಿಸಲು ಹಾಗೂ 1 ರಿಂದ 5ನೇ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ ಪರಿಸ್ಥಿತಿ ಅವಲೋಕಿಸಿ ನಂತರ ನಿರ್ಧರಿಸಲಾಗುವುದು ಎಂದು ತೀರ್ಮಾನಿಸಲಾಗಿದೆ.

*ಮುಂದುವರೆದು ಕೋವಿಡ್-19ರ ಸೋಂಕಿನ ಪ್ರಮಾಣ ಶೇ.2 ಕ್ಕಿಂತ ಹೆಚ್ಚು ಇರುವ ತಾಲ್ಲೂಕು/ವಲಯಗಳಲ್ಲಿ ಹಾಗೂ ಕೇರಳ ರಾಜ್ಯದೊಡನೆ ಗಡಿ ಹಂಚಿಕೊಂಡಿರುವ ತಾಲ್ಲೂಕುಗಳನ್ನು ಹೊರತುಪಡಿಸಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿಗಳಿಗೆ ಈ ಕಛೇರಿಯ ಸುತ್ತೋಲೆ ದಿನಾಂಕ:10/06/2021 ರಂತೆ ಶಾಲೆಗಳನ್ನು ಭೌತಿಕವಾಗಿ ಪ್ರಾರಂಭಿಸದೆ, ಪರ್ಯಾಯ ವಿಧಾನದಲ್ಲಿ ಕಲಿಕೆ ಮತ್ತು ಬೋಧನಾ ಪ್ರಕ್ರಿಯೆಗಳನ್ನು ಮುಂದುವರೆಸಲು ತಿಳಿಸಿದೆ.*

ಪ್ರಸ್ತುತ ದಿನಾಂಕ:06/09/2021 ರಿಂದ ಕೋವಿಡ್-19ರ ಸೋಂಕಿನ ಪ್ರಮಾಣ ಶೇ.2ಕ್ಕಿಂತ ಕಡಿಮೆ ಇರುವ ತಾಲ್ಲೂಕು/ವಲಯಗಳಲ್ಲಿನ (ಕೇರಳ ರಾಜ್ಯದೊಡನೆ ಗಡಿ ಹಂಚಿಕೊಂಡಿರುವ ತಾಲ್ಲೂಕುಗಳನ್ನು

- ಕೇರಳ ಗಡಿಭಾಗಕ್ಕೆ ಹೊಂದಿಕೊಂಡಿರುವ ತಾಲ್ಲೂಕು/ವಲಯಗಳಲ್ಲಿ ಜಿಲ್ಲಾಧಿಕಾರಿಗಳಿಂದ ಮಾಹಿತಿ ಪಡೆದು ಶಾಲೆಗಳನ್ನು ಪ್ರಾರಂಭಿಸುವುದು.

- ಸಾರಿಗೆ ಇಲಾಖೆಯು ವಿವಿಧ ಸಾರಿಗೆ ನಿಗಮಗಳಲ್ಲಿ ವಿದ್ಯಾರ್ಥಿಗಳ ಅಗತ್ಯಕ್ಕೆ ತಕ್ಕಂತೆ ಹೆಚ್ಚುವರಿ ಟ್ರಿಪ್ ಒದಗಿಸಲು ಅವಶ್ಯ ಕ್ರಮವಹಿಸುವುದು.

- ಶಾಲೆಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿ ಕಡ್ಡಾಯವಲ್ಲ. ಶಾಲೆಗೆ ಹಾಜರಾಗಲು ಬಯಸದೇ ಇರುವ ವಿದ್ಯಾರ್ಥಿಗಳಿಗೆ ಈಗ ಅನುಸರಿಸುತ್ತಿರುವ ಆನ್‌ಲೈನ್/ ಇತರ ಪರ್ಯಾಯ ವ್ಯವಸ್ಥೆಯನ್ನು ಮುಂದುವರೆಸಿಕೊಂಡು ಹೋಗಬೇಕು/ಒದಗಿಸಬೇಕು.

- ಉಳಿದಂತೆ ಉಲ್ಲೇಖ(2)ರ ಸುತ್ತೋಲೆಯಲ್ಲಿ ನಿಗದಿಪಡಿಸಿರುವ ಪ್ರಮಾಣಿತ ಕಾರ್ಯಾಚರಣಾ ವಿಧಾನ (SOP)ಗಳನ್ನು ಅನುಸರಿಸುವುದು.

**ವಿಶೇಷ ಸೂಚನೆ:-**

ಉಪನಿರ್ದೇಶಕರು (ಆಡಳಿತ) & (ಅಭಿವೃದ್ಧಿ) ರವರು ತಮ್ಮ ಜಿಲ್ಲೆಗಳಲ್ಲಿನ ತಾಲ್ಲೂಕು/ವಲಯಗಳಲ್ಲಿ ಶಾಲೆ ಪ್ರಾರಂಭವಾಗಿರುವ ಬಗ್ಗೆ ಮಾಹಿತಿಯನ್ನು ನೀಡುವುದು. ಶಾಲೆಯನ್ನು ಪ್ರಾರಂಭಿಸದೇ ಇರುವ ತಾಲ್ಲೂಕು/ ವಲಯಗಳ/ಶಾಲೆಗಳ ವಿವರವನ್ನು ಪತ್ರ್ಯೇಕವಾಗಿ primarydpi@gmail.com ಗೆ ಮಾಹಿತಿಯನ್ನು ಸಲ್ಲಿಸುವುದು.

ತರಗತಿಗಳನ್ನು ನಡೆಸಲು ಶಾಲಾ ಹಂತದಲ್ಲಿ ಕೊಠಡಿಗಳ ಲಭ್ಯತೆ, ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಶಿಕ್ಷಕರ ಸಂಖ್ಯೆಯನ್ನು ಆಧರಿಸಿಕೊಂಡು ಎಸ್.ಒ.ಪಿ ಪಾಲನೆಗೋಸ್ಕರ ಶಾಲಾ ವೇಳಾ ಪಟ್ಟಿಯನ್ನು ಪರಿಷ್ಕರಿಸಿ ತರಗತಿಗಳನ್ನು ನಡೆಸಬಹುದಾಗಿದೆ.

ಉಲ್ಲೇಖ(2)ರ ಸುತ್ತೋಲೆಯಲ್ಲಿರುವ ಎಲ್ಲ ಅಂಶಗಳನ್ನು ಗಮನದಲ್ಲಿರಿಸಿಕೊಂಡು ರಾಜ್ಯದಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಅನುಷ್ಠಾನಗೊಳಿಸಲು ಉಪನಿರ್ದೇಶಕರು(ಆಡಳಿತ) ಇವರು ಅಗತ್ಯ ಕ್ರಮವಹಿಸಲು ಸೂಚಿಸಿದೆ.

ಉಲ್ಲೇಖ (5)ರಲ್ಲಿ ಪ್ರಸಕ್ತ 2021-22ನೇ ಸಾಲಿನ ಮೌಲ್ಯಾಂಕನ ಮತ್ತು ವಿಶ್ಲೇಷಣೆ ಬಗ್ಗೆ ಕ್ರಮವಹಿಸಲು ಸೂಚನೆ ನೀಡಿದ್ದು, ಅದರಂತೆ ಪ್ರತಿ ಮಾಹೆವಾರು / ಕಾಲಕಾಲಕ್ಕೆ ಚೈಲ್ಡ್ ಪ್ರೊಫೈಲ್ / ಪೂರಕ ದಾಖಲೆ ಆಧರಿಸಿ ಮಕ್ಕಳ ಪ್ರಗತಿ ದಾಖಲಿಸಿಟ್ಟುಕೊಳ್ಳುವುದು. ಸದರಿ ಮಾಹಿತಿಗಳನ್ನು SATS ನಲ್ಲಿ ಅಪ್‌ಡೇಟ್ ಮಾಡುವುದು. ಇದು ಅನಿವಾರ್ಯ ಸಂದರ್ಭಗಳಲ್ಲಿ ಫಲಿತಾಂಶ ನಿರ್ಧರಿಸಲು ಸಹಾಯವಾಗುವಂತಿರಬೇಕು.

ಕೋವಿಡ್ ಹಿನ್ನೆಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ, ಇಲಾಖೆ ಮತ್ತು ಜಿಲ್ಲಾಡಳಿತಗಳು ನೀಡುವ ಸೂಚನೆಗಳನ್ನು ಪಾಲಿಸಲು ತಿಳಿಸುತ್ತಾ ಸದರಿ ಆದೇಶವು ಸರ್ಕಾರವು ಕಾಲ ಕಾಲಕ್ಕೆ ಸೂಚಿಸುವ ಆದೇಶಗಳಿಗೆ / ಬದಲಾವಣೆಗೆ ಒಳಪಟ್ಟಿರುತ್ತದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ:-

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಕಳುಹಿಸುತ್ತಾ, ಸರ್ಕಾರದ ಹಾಗೂ ಆರೋಗ್ಯ ಇಲಾಖೆಯ ರಾಜ್ಯ ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಸದಸ್ಯರ ನಡವಳಿಯಂತೆ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ರವರ ಮೂಲಕ ಮುಂದಿನ ಕ್ರಮಕ್ಕಾಗಿ.